ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು 12

ದಿನಾಂಕ: 13-01-2017.

ಸಂಖ್ಯೆ: ಪಪೂಶಿಇ/ಶೈಶಾ-05/ಅಕಾನಿ/2016-17

## ಜ್ಞಾಪನ

ವಿಷಯ : ಧಾರವಾಡ ಸಾಹಿತ್ಯ ಸಂಭ್ರಮ 2017 ಈ ಸಮ್ಮೇಳನದಲ್ಲಿ ಭಾಗವಹಿಸುವ ಉಪನ್ಯಾಸಕರಿಗೆ ಅನ್ಯ ಕಾರ್ಯ ನಿಮಿತ್ತ ಸೌಲಭ್ಯವನ್ನು ಒದಗಿಸುವ ಬಗ್ಗೆ.

ಉಲ್ಲೇಖ : ಅಧ್ಯಕ್ಷರು, ಧಾರವಾಡ ಸಾಹಿತ್ಯ ಸಂಭ್ರಮ ಟ್ರಸ್ಟ್ (ರಿ) ಇವರ ಪತ್ರ ದಿನಾಂಕ: 13-10-2016.

** ** **

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಧಾರವಾಡ ಸಾಹಿತ್ಯ ಸಂಭ್ರಮ ಟ್ರಸ್ಟ್ (ರಿ) ಧಾರವಾಡ ಇವರು ಧಾರವಾಡ ಸಾಹಿತ್ಯ ಸಂಭ್ರಮ ಎಂಬ ಸಾಹಿತ್ಯ ಸಮ್ಮೇಳನವನ್ನು ದಿನಾಂಕ: 20-01-2017 ರಿಂದ 22-01-2017ರ ವರೆಗೆ ಮಾರ್ಪಡಿಸಿರುತ್ತಾರೆ. ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಅನ್ಯ ಕಾರ್ಯ ನಿಮಿತ್ತ ಸೌಲಭ್ಯ ನೀಡುವಂತೆ ಕೋರಿರುತ್ತಾರೆ. ಸದರಿ ಪ್ರಸ್ತಾವನೆ ಪರಿಶೀಲಿಸಲಾಗಿ, ಉಪನ್ಯಾಸಕರುಗಳು ಭಾಗವಹಿಸಲು ಕೆಳಕಂಡ ಷರತ್ತುಗಳನ್ವಯ ಅನುಮತಿಯನ್ನು ನೀಡಲಾಗಿದೆ.

ಸದರಿ ಸಮ್ಮೇಳನದಲ್ಲಿ ಭಾಗವಹಿಸುವ ಉಪನ್ಯಾಸಕರುಗಳಿಗೆ ದಿನಾಂಕ: 20-01-2017 ರಿಂದ 22-01-2017ರ ವರೆಗೆ ಅನ್ಯಕಾರ್ಯನಿಮಿತ್ತ (ಓಓಡಿ) ಸೌಲಭ್ಯವನ್ನು ನೀಡಲಾಗಿದೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ಉಪನ್ಯಾಸಕರುಗಳು ಯಾವುದೇ ಭತ್ಯಗೆ ಅರ್ಹರಿರುವುದಿಲ್ಲ. ವಿದ್ಯಾರ್ಥಿಗಳಿಗೆ ಈ ದಿನಗಳಂದು ನಷ್ಟವಾಗುವ ತರಗತಿಗಳನ್ನು ರಜಾ ದಿನಗಳಂದು ಅಥವಾ ಹೆಚ್ಚುವರಿ ತರಗತಿಗಳನ್ನು ತೆಗೆದುಕೊಂಡು ಸರಿದೂಗಿಸಬೇಕೆಂಬ ಷರತ್ತಿನೊಂದಿಗೆ ಅನುಮತಿ ನೀಡಿದೆ. ಈ ಸಮ್ಮೇಳನದಲ್ಲಿ ಭಾಗವಹಿಸಿದ ಬಗ್ಗೆ ಹಾಜರಾತಿ ಪ್ರಮಾಣ ಪತ್ರ ಪಡೆಯಲು ಸಂಬಂಧಪಟ್ಟ ಉಪನಿರ್ದೇಶಕರು/ ಪ್ರಾಂಶುಪಾಲರಿಗೆ ಸೂಚಿಸಿದೆ.

ಜಂಟಿ ನಿರ್ದೇಶಕರು(ಶೈ)
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಯನ್ನು ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ:-**

1. ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ,
2. ಅಧ್ಯಕ್ಷರು, ಧಾರವಾಡ ಸಾಹಿತ್ಯ ಸಂಭ್ರಮ ಟ್ರಸ್ಟ್ (ರಿ), ಮನೋಹರ ಗ್ರಂಥ ಮಾಲಾ, ಲಕ್ಷ್ಮೀಭವನ, ಸುಬಾಸ ರಸ್ತೆ, ಧಾರವಾಡ- 580001.
3. ನಿರ್ದೇಶಕರ ಆಪ್ತಶಾಖೆ- ಮಾಹಿತಿಗಾಗಿ.

Scanned by CamScanner